# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಬಿ.ಟಿ.ಎಂ ಲೇಔಟ್ ಉಪ–ವಿಭಾಗದ ವಾರ್ಡ್ ಸಂಖ್ಯೆ–152 ಎಸ್.ಜಿ.ಪಾಳ್ಯ ಕಛೇರಿಯಲ್ಲಿ ದಿನಾಂಕ: 16.01.2021 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು

* * * * * *

ದಿನಾಂಕ–16–01–2021ರಂದು ನಡೆಸಲಾದ ವಾರ್ಡ್ ಮಟ್ಟದ ಸಾರ್ವಜನಿಕರ ಕುಂದು ಕೊರತೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ಮತ್ತು ಅಭಿವೃದ್ದಿ ಕಾಮಗಾರಿಗಳನ್ನು ನಿರ್ವಹಿಸುವ ಸಂಬಂಧ ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲಾಗಿ ಮೊದಲಿಗೆ ಹಾಜರಿದ್ದ, ಅದ್ಯಕ್ಷರಿಗೆ ಸ್ವಾಗತವನ್ನು ಕೋರುತ್ತಾ ಹಾಗೂ ಸಭೆಗೆ ಹಾಜರಾದ ಎಲ್ಲಾ ಇಲ್ಲಾಖೆಯ ಅಧಿಕಾರಿ ವರ್ಗದವರಿಗೆ ಮತ್ತು ಸ್ಥಳೀಯ ನಾಗರೀಕರಿಗೆ ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

ಸಭೆಯನ್ನು ಪ್ರಾರಂಭಿಸುತ್ತಾ, ಸದರಿ ವಾರ್ಡ್‌ನ ಎಲ್ಲಾ ಕುಂದುಕೊರತೆಗಳನ್ನು ಇಲಾಖೆವಾರು ಚರ್ಚಿಸಿ ಬಗೆಹರಿಸಿಕೊಳ್ಳಲು ಅಧ್ಯಕ್ಷರು ಸಲಹೆಯನ್ನು ನೀಡಿರುತ್ತಾರೆ. ಈ ಕುರಿತಂತೆ ಈ ಕೆಳಕಂಡ ವಿಷಯಗಳನ್ನು ಸಂಕ್ಷಿಪ್ತವಾಗಿ ಚರ್ಚಿಸಿ ಪರಿಹರಿಸುವ ಬಗ್ಗೆ ಕೈಗೊಳ್ಳುವ ಕ್ರಮಗಳ ಬಗ್ಗೆ ಅಧಿಕಾರಿಗಳಿಗೆ ನಿರ್ದೇಶನವನ್ನು ನೀಡಲಾಯಿತು.

ಸಭೆಗೆ ಹಾಜರಿದ್ದ ಅಧಿಕಾರಿ ವರ್ಗ/ ಸದಸ್ಯರು

| ಕ್ರ.ಸಂ. | ಹೆಸರು | ಮೊಬೈಲ್ ಸಂಖ್ಯೆ |
|---|---|---|
| 1 | ಶ್ರೀ.ಎಸ್.ಪ್ರಭಾಕರ್, ಮುಖ್ಯ ಅಭಿಯಂತರರು (ಪೂರ್ವ)ಬಿ.ಬಿ.ಎಂ.ಪಿ. | 9480685379 |
| 2 | ಶ್ರೀ.ಸತೀಶ್.ಡಿ ಸ.ಇಂ–152 ವಾರ್ಡ್ | 9964310730 |
| 3 | ಶ್ರೀ.ಅಜಯ್‌ಕುಮಾರ್ ಕಿರಿಯ ಆರೋಗ್ಯ ಪರಿವೀಕ್ಷಕರು | 9632222304 |
| 4 | ಶ್ರೀ ಪುರುಷೋತ್ತಮ, (ಎಲೆಕ್ಟ್ರೀಕಲ್, ಬಿ.ಬಿ.ಎಂ.ಪಿ) | 9611177415 |
| 5 | ಶ್ರೀ.ಶಶಿಧರ ಸಹಾಯಕ ಅಭಿಯಂತರರು ಮೂಲಭೂತ ಸೌಕರ್ಯ ಕೇಂದ್ರ | 9341320868 |
| 6 | ಶ್ರೀಮತಿ.ಆಶಾ.ಹೆಚ್. ಸಹಾಯಕ ಅಭಿಯಂತರರು ಬೇಸ್ಕಾಂ | 9900724229 |
| 7 | ಶ್ರೀ.ಕೃಷ್ಣ.ಸಿ ಕೆಲಸ ಪರಿವೀಕ್ಷಕರು ಬಿ.ಡಬ್ಲ್ಯೂ.ಎಸ್.ಎಸ್.ಬಿ | 9845768405 |
| 8 | ಶ್ರೀ ಸೈಯದ್ ನಜರೂದ್ದಿನ್, ಸದಸ್ಯರು | 9741518897 |
| 9 | ಶ್ರೀ.ವಿ.ಗಿರೀಶ್ ವಿದ್ಯತ್ ವಿಭಾಗ ಬಿ.ಬಿ.ಎಂ.ಪಿ (ದಕ್ಷಿಣ) | 8951596617 |
| 10 | ಶ್ರೀ ತಿಮ್ಮಗೌಡ ಎ.ಎಸ್.ಐ ಮಡಿವಾಳ ಪೊಲೀಸ್ ಠಾಣೆ | 9845644651 |
| 11 | ಶ್ರೀ.ಮಂಜುನಾಥ್.ಪಿ ವಾರ್ಡ್ ಮೇಲ್ವಿಚಾರಕರು ಘ.ತ್ಯಾ.ನಿ | 9740903427 |
| 12 | ಶ್ರೀ.ಎನ್.ಲೋಕೇಶ್ | 9448579144 |

1) ಸಭೆಯಲ್ಲಿ ಹಾಜರಿದ್ದ ಶ್ರೀ ಸೈದ್ ನಜರುದ್ದಿನ್ ರವರು 6ನೇ ಡಿ ಮುಖ್ಯರಸ್ತೆಯಲ್ಲಿ ಸಿ.ಸಿ.ಟಿ.ವಿ ಅಳವಡಿಸಬೇಕಾಗಿರುತ್ತದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದ್ದರು.

   ಈ ಸಂಬಂಧ ವಾರ್ಡ್ ಅಭಿಯಂತರರು ಮಾತನಾಡಿ, ಸಿ.ಸಿ.ಟಿ.ವಿ ಅಳವಡಿಸುವ ಕಾಮಗಾರಿ ಪ್ರಕ್ರಿಯೆಯಲ್ಲಿರುತ್ತದೆ. ಕೆಲವೇ ದಿನಗಳಲ್ಲಿ 6ನೇ ಡಿ ಮುಖ್ಯರಸ್ತೆಯಲ್ಲಿ ಸಿ.ಸಿ.ಟಿ.ವಿಯನ್ನು ಅಳವಡಿಸಲಾಗುವುದು ಎಂದು ಸಭೆಗೆ ತಿಳಿಸಿದರು.

2) ಸಿ.ಸಿ.ಟಿ.ವಿ ಕ್ಯಾಮರಗಳು ಯಾವ ಯಾವ ಸ್ಥಳಗಳಲ್ಲಿ ಅಳವಡಿಸಿರುವ ಬಗ್ಗೆ ಗುರುತಿಸಿ ಪೊಲೀಸ್ ಠಾಣೆಗೆ ವರದಿ ಸಲ್ಲಿಸಲು ಮಾನ್ಯ ಅಧ್ಯಕ್ಷರು ವಾರ್ಡ್ ಅಭಿಯಂತರರಿಗೆ ತಿಳಿಸಲಾಗಿತ್ತು.

   ಅದರಂತೆ ಈ ಸಭೆಯಲ್ಲಿ ವಾರ್ಡ್ ಅಭಿಯಂತರರು ಸಿ.ಸಿ.ಟಿ.ವಿ ಕ್ಯಾಮರಾಗಳನ್ನು ಅಳವಡಿಸಿರುವ ವರದಿಯನ್ನು ಸಲ್ಲಿಸಿರುತ್ತಾರೆ.

3) ಕಳೆದ ಸಭೆಯಲ್ಲಿ ಮಾನ್ಯ ಅಧ್ಯಕ್ಷರು ಚರ್ಚಿಸಲಾಗಿದ್ದ ವಾರ್ಡ್ ವ್ಯಾಪ್ತಿಯಲ್ಲಿ ಪಾದಚಾರಿ ರಸ್ತೆಗಳು ಮತ್ತು ಶೌಚಲಯಗಳ ನಿರ್ಮಾಣದ ಅಗತ್ಯತೆಯ ಬಗ್ಗೆ ಮಾಹಿತಿಯನ್ನು ಕ್ರೊಢಿಕರಿಸಿ ಮೇಲಾಧಿಕಾರಿಗಳಿಗೆ ವರದಿಯನ್ನು ಸಲ್ಲಿಸಲು ತಿಳಿಸಿರುತ್ತಾರೆ.

4) ಮಾನ್ಯ ಅಧ್ಯಕ್ಷರು ಮಾತನಾಡಿ, ಭುವನಪ್ಪ ಬಡಾವಣೆ ಮತ್ತು ಸುತ್ತಮುತ್ತಲಿನ ಪ್ರದೇಶದ ಸಾರ್ವಜನಿಕ ಸ್ಥಳಗಳಲ್ಲಿ ಅನಧಿಕೃತ ಚಟುವಟಿಗಳು ಹಾಗೂ ಧೂಮಪಾನ ನಿಷೇಧದ ಬಗ್ಗೆ ಕೈಗೊಂಡ ಕ್ರಮಗಳ ಬಗ್ಗೆ ಹಾಜರಿದ್ದ ಪೊಲೀಸ್ ಅಧಿಕಾರಿಗಳಿಗೆ ಕೇಳಲಾಗಿ, ಸಭೆಯಲ್ಲಿ ಹಾಜರಿದ್ದ ಪೊಲೀಸ್ ಅಧಿಕಾರಿಗಳು ಮಾತನಾಡಿ ಈ ಸಂಬಂಧ ಪ್ರತಿನಿತ್ಯ ಈ ತರಹದ ಚಟುವಟಿಕೆಗಳನ್ನು ಗುರುತಿಸಿ ಸ್ಥಳದಲ್ಲೇ ದಂಡವನ್ನು ವಸೂಲಾತಿ ಮಾಡಲಾಗುತ್ತಿದೆ ಎಂದು ಸಭೆಗೆ ತಿಳಿಸಿದರು. ಇದೆ ಸಂಧರ್ಭದಲ್ಲಿ ಶ್ರೀ ನಜರೂದ್ದಿನ್ ಮಾತನಾಡಿ 6ನೇ ಅಡ್ಡರಸ್ತೆ ಬಾಲಾಜಿ ನಗರದಲ್ಲೂ ಧುಮಪಾನ ಹಾಗೂ ಅನಧಿಕೃತ ಚಟುವಟಿಗಳು ಹೆಚ್ಚಾಗಿ ಕಂಡುಬರುತ್ತಿದೆ ಎಂದು ತಿಳಿಸಿದರು. ಮತ್ತು ಶ್ರೀ ಲೋಕೇಶ್ ಮಾತನಾಡಿ ಚಿಕ್ಕಆಡುಗೊಡಿ ಕೆ.ಇ.ಬಿ ಕಛೇರಿ ಹತ್ತಿರದಲ್ಲೂ ಧುಮಪಾನ ಹಾಗೂ ಇತರೆ ಅನಧಿಕೃತ ಚಟುವಟಿಕೆಗಳು ನಡೆಯುತ್ತಿರುತ್ತವೆ ಎಂದು ತಿಳಿಸಿದರು. ಆಗ ಮಾನ್ಯ ಅಧ್ಯಕ್ಷರು ಮಾತನಾಡಿ, ಈ ಸಂಬಂಧ ಕೂಡಲೇ ಕಾನೂನು ರೀತ್ಯ ಕ್ರಮ ಜರುಗಿಸಲು ತಿಳಿಸಿದರು.



S. Prabhu

5) ಕಳೆದ ಸಭೆಯಂತೆ ಈ ಸಭೆಯಲ್ಲೂ ತಾವರೆಕೆರೆ ಮುಖ್ಯರಸ್ತೆಯ ಕಾಮಗಾರಿಯ ಬಗ್ಗೆ ಮಾನ್ಯ ಅಧ್ಯಕ್ಷರು ಪ್ರಸ್ತಾಪಿಸಲಾಗಿ, ಸಭೆಯಲ್ಲಿ ಹಾಜರಿದ್ದ ಶ್ರೀ.ಶಶೀದರ, ಸಹಾಯಕ ಅಭಿಯಂತರರು, ರಸ್ತೆ ಮೂಲಭೂತ ಸೌಕರ್ಯ ಕೇಂದ್ರ ಕಛೇರಿ, ರವರು ಮಾತನಾಡಿ ಸದರಿ ಕಾಮಗಾರಿಯ ಕಾರ್ಯದೇಶವನ್ನು ನೀಡಲಾಗಿದ್ದು, ಮುಂದಿನ ವಾರದೊಳಗಾಗಿ ಕಾಮಗಾರಿಯನ್ನು ಪ್ರಾರಂಭಿಸುವುದಾಗಿ ತಿಳಿಸಿದರು.

6) ವಾರ್ಡ್ ಅಭಿಯಂತರರು ಮಾತನಾಡಿ, ಕಾವೆರಿ ಬಡಾವಣೆ 1ನೇ ಅಡ್ಡರಸ್ತೆಯಲ್ಲಿ ಒಳಚರಂಡಿ ಸಂಪರ್ಕಕ್ಕಾಗಿ ಕಾಮಗಾರಿ ನಡೆಯುತ್ತಿದ್ದು, ಕಾಮಗಾರಿ ಪೂರ್ಣಗೊಂಡ ನಂತರ ರಸ್ತೆಯನ್ನು ಯಥಾಸ್ಥಿತಿ ಕಾಪಾಡಲು ಸಭೆಯಲ್ಲಿ ಹಾಜರಿದ್ದ ಶ್ರೀ ಕೃಷ್ಣ ಕೆಲಸ ಪರಿವೀಕ್ಷಕರು ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ತಿಳಿಸಿದರು.

7) ಮಾನ್ಯ ಅಧ್ಯಕ್ಷರು ಮಾತನಾಡಿ, ಸಭೆಯಲ್ಲಿ ಹಾಜರಿದ್ದ ಬೇಸ್ಕಾಂ ಅಧಿಕಾರಿಗಳಿಗೆ ತಮ್ಮ ಇಲಾಖೆಯಿಂದ ಹೊಸ ಕಟ್ಟಡಕ್ಕೆ ವಿದ್ಯುತ್ ಸಂಪರ್ಕ ನೀಡಲು ಯಾವ ಯಾವ ಮಾನದಂಡಣೆಗಳನ್ನು ಅಳವಡಿರುವ ಬಗ್ಗೆ ಪೂರ್ಣ ಮಾಹಿತಿಗಳನ್ನು ವಾರ್ಡ್ ಅಭಿಯಂತರರಿಗೆ ಒದಗಿಸಲು ಸೂಚಿಸಿದರು.

8) ಮಾನ್ಯ ಅಧ್ಯಕ್ಷರು, ಘನತ್ಯಾಜ್ಯದ ನಮೂನೆಯನ್ನು ಶ್ರೀ ಅಜಯ್ ಕಿರಿಯ ಆರೋಗ್ಯ ಪರಿವೀಕ್ಷರಿಗೆ ನಿಡಿ, ನಮೂನೆಯನ್ನು ಬರ್ತಿಮಾಡಿ ಪ್ರತಿದಿನ ವಾಟ್ಸ್‌ಆಪ್ ಮುಖೇನ ಸಲ್ಲಿಸಲು ತಿಳಿಸಿದರು.

9) ಮಾನ್ಯ ಅಧ್ಯಕ್ಷರು ಮಾತನಾಡಿ, ಮಾರ್ಷಲ್‌ರವರು ಪ್ರತಿದಿನ ಮಾಸ್ಕ್ ದರಿಸದವರಿಗೆ ಎಷ್ಟು ದಂಡವನ್ನು ವಿಧಿಸಿರುತ್ತಿರಾ? ಇದರ ಬಗ್ಗೆ ಮುಂದಿನ ಸಭೆಯಲ್ಲಿ ವಿವರಗಳನ್ನು ಸಲ್ಲಿಸಲು ಸೂಚಿಸಿದರು.

ಕೊನೆಯದಾಗಿ, ಅದ್ಯಕ್ಷರು ಮಾತನಾಡಿ, ಈ ಸಭೆಗೆ ಗೈರಾದ ಅಧಿಕಾರಿಗಳ ವಿವರಗಳನ್ನು ಮುಂದಿನ ಸಭೆಯಲ್ಲಿ ಸಲ್ಲಿಸಲು ತಿಳಿಸುತ್ತಾ, ಈ ಮೇಲ್ಕಂಡ ಎಲ್ಲಾ ವಿಷಯಗಳನ್ನು ಹಾಗೂ ಸಮಸ್ಯೆಗಳನ್ನು ಬರುವ ಮುಂದಿನ ಸಭೆಯೊಳಗಾಗಿ ನಿವಾರಣೆ ಮಾಡಿ ಅನುಪಾಲನೆ ವರದಿಯನ್ನು ಸಂಬಂಧಪಟ್ಟ ಅಧಿಕಾರಿಗಳು ಕಳುಹಿಸಿಕೊಡಬೇಕಾಗಿ ಈ ಮೂಲಕ ಸೂಚಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಶ್ರೀ. ಸತೀಶ್.ಡಿ)
ಕಾರ್ಯದರ್ಶಿಗಳು
ವಾರ್ಡ್–152 ಎಸ್.ಜಿ.ಪಾಳ್ಯ

S. Prabhu
(ಶ್ರೀ. ಎಸ್.ಪ್ರಭಾಕರ್)
ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್–152 ಎಸ್.ಜಿ.ಪಾಳ್ಯ

ಪ್ರತಿಯನ್ನು:

1. ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಘನತ್ಯಾಜ್ಯ) ರವರ ಅವಗಾಹನೆಗೆ ಸಲ್ಲಿಸಿದೆ.
4. ಜಂಟಿ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
5. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
6. ಅಧೀಕ್ಷಕ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ಕಾರ್ಯಪಾಲಕ ಅಭಿಯಂತರರು, ಬಿ.ಟಿ.ಎಂ.ಲೇಔಟ್ ವಿಭಾಗರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೋರಮಂಗಲ ಉಪ–ವಿಭಾಗ ರವರಿಗೆ ಮುಂದಿನ ಕ್ರಮಕ್ಕೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಮುಂದಿನ ಕ್ರಮಕ್ಕೆ.
10. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲಮಂಡಳಿ, ಬಿ.ಟಿ.ಎಂ ರವರಿಗೆ ಮುಂದಿನ ಕ್ರಮಕ್ಕೆ
11. ಸಹಾಯಕ ಕಾರ್ಯಪಾಲಕ ಅಭಿಯಂತರರು, ರಸ್ತೆ ಮೂಲಭೂತ ಸೌಕರ್ಯ(ದ) ರವರಿಗೆ ಮುಂದಿನ ಕ್ರಮಕ್ಕೆ.